ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಅತಿಥಿ ಉಪನ್ಯಾಸಕರು ಮತ್ತು ಶಿಕ್ಷಕರ ವೇತನ ಬಿಡುಗಡೆ ಬಗ್ಗೆ

ಶ್ರೀ ಕೆ. ಟಿ. ಶ್ರೀಕಂಠೇಗೌಡ(ಪದವೀಧರರ ಕ್ಷೇತ್ರ) -

70 (23) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಸರ್ಕಾರಿ ಪದವಿ ಪೂರ್ವ ಕಾಲೇಜು, ಪ್ರೌಢ ಹಾಗೂ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರು /ಶಿಕ್ಷಕರುಗಳ ಸಂಖ್ಯೆ ಎಷ್ಟು;

(ಆ) ಇವರಿಗೆ ಮಾರ್ಚ್ ತಿಂಗಳಿನಿಂದ ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಅತಿಥಿ ಉಪನ್ಯಾಸಕರಿಗೆ ವೇತನ ನೀಡಿದ ಮಾದರಿಯಲ್ಲಿ ಈ ಶಿಕ್ಷಕರಿಗೆ ವೇತನ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು?